# Bangalore
# Regional News
# 24.12.2025 / 6.40 p.m.
## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕ್ರಿಕೆಟ್ ಆಡಲು ನಿರಾಕರಣೆ ; ಸರ್ಕಾರದ ಕ್ರಮ ಸಮರ್ಥಿಸಿಕೊಂಡ ಗೃಹ ಸಚಿವ ಡಾ. ಜಿ. ಪರಮೇಶ್ವರ್
2. ಬೆಂಗಳೂರು ದಟ್ಟಣೆ ಕಡಿಮೆ ಮಾಡಲು ಸ್ಯಾಟಲೈಟ್ ಟೌನ್ ನಿರ್ಮಾಣ ಯೋಜನೆಗೆ ಕೇಂದ್ರಕ್ಕೆ ರಾಜ್ಯ ಸರ್ಕಾರ ಮನವಿ
3. ಕಲಬುರಗಿಯಲ್ಲಿ ಜವಳಿ ಪಾರ್ಕ್ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ನಿರ್ಧಾರ
4. ತುಮಕೂರಿನಲ್ಲಿ ಸಂಸತ್ ಕ್ರೀಡಾಮಹೋತ್ಸವ ಅಭಿಯಾನಕ್ಕೆ ಚಾಲನೆ ನೀಡಿದ ಕೇಂದ್ರ ಸಚಿವ ವಿ. ಸೋಮಣ್ಣ
5. ವಿಜಯ್ ಹಜಾರೆ ಟ್ರೋಫಿ ; ಜಾರ್ಖಂಡ್ ವಿರುದ್ಧ ಕರ್ನಾಟಕಕ್ಕೆ 5 ವಿಕೆಟ್‌ಗಳ ರೋಚಕ ಜಯ

***************

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ವಿಜಯ್ ಹಜಾರೆ ಟ್ರೋಫಿ ಕ್ರಿಕೆಟ್ ಆಟಕ್ಕೆ ಅನುಮತಿ ನಿರಾಕರಿಸಿದ ಸರ್ಕಾರದ ಕ್ರಮವನ್ನು ಗೃಹಸಚಿವ ಡಾ. ಜಿ. ಪರಮೇಶ್ವರ್ ಸಮರ್ಥಿಸಿಕೊಂಡಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನ್ಯಾಯಮೂರ್ತಿ ಮೈಕೆಲ್ ಡಿ ಕುನ್ಹಾ, ವರದಿಯ ಯಾವ ಶಿಫಾರಸ್ಸನ್ನು ಕೆಎಸ್‌ಸಿಎ ಅಳವಡಿಕೆ ಮಾಡಿಕೊಂಡಿರಲಿಲ್ಲ. ಹೀಗಾಗಿ ಉನ್ನತಮಟ್ಟದ ಸಮಿತಿಯಿಂದ ಅನುಮತಿ ನಿರಾಕರಿಸಲಾಯಿತು ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ : ಡಾ. ಜಿ. ಪರಮೇಶ್ವರ್

ಇದೇ ವೇಳೆ ಮಾಜಿ ಸಚಿವ ಭೈರತಿ ಬಸವರಾಜು ಬಂಧನಕ್ಕೆ ಲುಕ್‌ಔಟ್ ನೋಟಿಸ್ ಹೊರಡಿಸಿರುವ ಕುರಿತಂತೆ ಪ್ರತಿಕ್ರಿಯಿಸಿ ಕಾನೂನು ಪ್ರಕಾರ ಪೊಲೀಸರು ಕ್ರಮ ಕೈಗೊಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ.

***************

ನದಿ ಜೋಡಣೆ ಯೋಜನೆಯಲ್ಲಿ ರಾಜ್ಯಕ್ಕೆ ಕನಿಷ್ಠ 40 ರಿಂದ 45 ಟಿಎಂಸಿ ನೀರು ನೀಡಬೇಕು. ಗೋದಾವರಿ– ಕಾವೇರಿ ನದಿ ಜೋಡಣೆ ಯೋಜನೆಯಲ್ಲಿ ಹೆಚ್ಚುವರಿ 5 ಟಿಎಂಸಿ ನೀರನ್ನು ಭೀಮಾ ನದಿ ಪ್ರದೇಶಕ್ಕೆ ನೀಡಬೇಕು ಎಂದು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸುಪ್ರೀಂ ಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ ಎಲ್ಲಾ ದಾಖಲೆಗಳನ್ನು ಎರಡು ತಿಂಗಳಲ್ಲಿ ಕೇಂದ್ರ ಸರ್ಕಾರಕ್ಕೆ ಸಲ್ಲಿಕೆ ಮಾಡಲಾಗುವುದು ಎಂದು ತಿಳಿಸಿದ್ದಾರೆ

ಭದ್ರಾ ಮೇಲ್ದಂಡೆ ಯೋಜನೆಗೆ ಘೋಷಿಸಲಾಗಿರುವ ಹಣವನ್ನು ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಕೇಂದ್ರ ನಗರಾಭಿವೃದ್ಧಿ ಸಚಿವ ಮನೋಹರ್ ಲಾಲ್ ಖಟ್ಟರ್ ಅವರನ್ನು ಭೇಟಿ ಮಾಡಿ, ಬೆಂಗಳೂರಿನ ಜನ ದಟ್ಟಣೆ ಹಾಗೂ ಒತ್ತಡ ಕಡಿಮೆ ಮಾಡಲು ಸ್ಯಾಟಲೈಟ್ ಟೌನ್ ನಿರ್ಮಾಣ ಯೋಜನೆಗೆ ಮನವಿ ಮಾಡಲಾಗಿದೆ. ಇದನ್ನು ಪರಿಗಣಿಸುವುದಾಗಿ ಕೇಂದ್ರ ಸಚಿವರು ಭರವಸೆ ನೀಡಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

***************

ಭಾರತದ ಜವಳಿ ವಲಯವು 2025ರಲ್ಲಿ ಹೂಡಿಕೆಯಲ್ಲಿ ಮತ್ತು ರಫ್ತಿನಲ್ಲಿ ಏರಿಕೆ ದಾಖಲಿಸಿದೆ. ಇದೇ ವೇಳೆ ರಾಜ್ಯದ ಕಲಬುರಗಿ ಸೇರಿದಂತೆ ಒಟ್ಟು 7 ಪಿಎಂ ಮೆಗಾ ಇಂಟಿಗ್ರೇಟೆಡ್ ಜವಳಿ ಪ್ರದೇಶ ಮತ್ತು ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ಈ ವಿಷಯವನ್ನು ಜವಳಿ ಸಚಿವಾಲಯ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ ಸ್ಪಷ್ಟಪಡಿಸಲಾಗಿದೆ.

ಕೇಂದ್ರ ಸರ್ಕಾರ ಸ್ಥಳಗಳ ಅನುಮೋದನೆಯ ಬಳಿಕ ಮೂಲಸೌಕರ್ಯ ಒದಗಿಸಲು 7 ರಾಜ್ಯ ಸರ್ಕಾರಗಳು ಒಪ್ಪಿಗೆ ಸೂಚಿಸಿವೆ.

***************

ದೇಶದ ಕ್ರೀಡಾ ಕ್ಷೇತ್ರದಲ್ಲಿ ಭಾರತ ಹೆಚ್ಚಿನ ಸಾಧನೆ ಮಾಡಲು ಹಾಗೂ ಕ್ರೀಡಾಪಟುಗಳ ಸಾಮರ್ಥ್ಯವನ್ನು ವೃದ್ಧಿ ಮಾಡಲು ದೇಶಾದ್ಯಂತ ಸಂಸತ್ ಕ್ರೀಡಾ ಮಹೋತ್ಸವ ಅಭಿಯಾನ ನಡೆಸಲಾಗುತ್ತಿದೆ ಎಂದು ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ.

ತುಮಕೂರು ಲೋಕಸಭಾ ವ್ಯಾಪ್ತಿಯ ಸಂಸದ್ ಕ್ರೀಡಾ ಮಹೋತ್ಸವದ ಅಂಗವಾಗಿ ನಡೆದ ಕಬಡ್ಡಿ ಮತ್ತು ಖೋ ಖೋ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕ್ರೀಡೆಯು ವಿಶ್ವಾಸಕ್ಕೆ, ಆತ್ಮೀಯತೆಗೆ, ಸ್ನೇಹಕ್ಕೆ ದೊಡ್ಡ ಸಂಕೇತವಾಗಿದೆ. ದೇಶ-ದೇಶಗಳ ನಡುವೆ ಸ್ನೇಹ ಮೂಡಲು ಕ್ರೀಡೆ ಸಹಕಾರಿಯಾಗಲಿದೆ. ಇದೇ ಕಾರಣಕ್ಕೆ ಪ್ರಧಾನಿಯವರು ಕ್ರೀಡೆಗೆ ಸಾಕಷ್ಟು ಒತ್ತು ನೀಡುತ್ತಿದ್ದಾರೆ ಎಂದು ಹೇಳಿದ್ದಾರೆ.

***************

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಾಂಪ್ರದಾಯಿಕ ಕೋಳಿ ಅಂಕಕ್ಕೆ ಪೊಲೀಸ್ ನಿರ್ಬಂಧ ವಿಚಾರದ ಕುರಿತಂತೆ ಸರ್ಕಾರ ತೀರ್ಮಾನ ತೆಗೆದುಕೊಳ್ಳಬೇಕು ಎಂದು ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್ ಸ್ಪಷ್ಟಪಡಿಸಿದ್ದಾರೆ.

ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಗಳೂರಿನ ಹೊರ ವಲಯದ ಮುಡಿಪು ಬಳಿ ನೂತನವಾಗಿ ನಿರ್ಮಾಣಗೊಳ್ಳುತ್ತಿರುವ ಕಾರಾಗೃಹದ ಕಾಮಗಾರಿ ಮುಕ್ತಾಯಕ್ಕೆ ಈ ಬಾರಿಯ ಬಜೆಟ್‌ನಲ್ಲಿ ಅನುದಾನ ಮೀಸಲಿಡಲು ಸರ್ಕಾರವನ್ನು ಕೋರಲಾಗುವುದು ಎಂದು ತಿಳಿಸಿದ್ದಾರೆ.

***************

ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ತಾಲೂಕಿನ ಸಿಂದಗೇರಿ ಬಳಿ ಇರುವ ಕಿಷ್ಕಿಂದ ವಿಶ್ವವಿದ್ಯಾಲಯದ ಎಂಬಿಎ ಹಾಗೂ ಎಂಸಿಎ ಕೋರ್ಸ್‌ಗಳ ಮೊದಲ ಬ್ಯಾಚ್ ನ  ವಿದ್ಯಾರ್ಥಿಗಳ ಪದವಿ ಪ್ರದಾನ ಸಮಾರಂಭ ಮತ್ತು ವಿಶ್ವವಿದ್ಯಾಲಯದ ಪ್ರಥಮ ಘಟಿಕೋತ್ಸವ  ಇಂದು ನಡೆಯಿತು.

ಈ ವೇಳೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಬಳ್ಳಾರಿ ಮಠದ ಸಿದ್ದಲಿಂಗ ಸ್ವಾಮಿಗಳಿಗೆ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದರು.  ಘಟಿಕೋತ್ಸವದಲ್ಲಿ 80 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು.

***************

ಬೆಂಗಳೂರಿನ ಮಡಿವಾಳ ಕೆರೆಯಲ್ಲಿ ಕಳೆ ತೆಗೆಯುವ ಯಂತ್ರಕ್ಕೆ ಪ್ರಾಯೋಗಿಕವಾಗಿ ಚಾಲನೆ ನೀಡಲಾಗಿದ್ದು, ಅವಶ್ಯಕತೆಗೆ ಅನುಗುಣವಾಗಿ ಇತರೆ ಕೆರೆಗಳಲ್ಲಿಯೂ ಇದನ್ನು ಬಳಸಿಕೊಳ್ಳುವಂತೆ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಪಾಲಿಕೆ ವ್ಯಾಪ್ತಿಯಲ್ಲಿರುವ ಕೆರೆಗಳಲ್ಲಿ ಜಲಕಳೆ ತೆರವುಗೊಳಿಸುವ ಉದ್ದೇಶದಿಂದ ಹೊಸದಾಗಿ ಅತ್ಯಾಧುನಿಕ ಕಳೆ ತೆಗೆಯುವ ಯಂತ್ರವನ್ನು ಖರೀದಿಸಲಾಗಿದೆ. ಈ ಯಂತ್ರವನ್ನು ಸಮರ್ಪಕವಾಗಿ ಸದ್ಬಳಕೆ ಮಾಡಿಕೊಂಡು, ಅವಶ್ಯಕತೆಗನುಗುಣವಾಗಿ ಕಳೆ ತೆಗೆಯುವ ಮೂಲಕ ಕೆರೆಗಳನ್ನು ಸ್ವಚ್ಛವಾಗಿ ನಿರ್ವಹಿಸಲು ಕ್ರಮವಹಿಸುವಂತೆ ಸೂಚಿಸಿದ್ದಾರೆ.

ರುದ್ರ ಆಕ್ವಾ ಮ್ಯಾಕ್ಸ್ ಎಂಬ ಅತ್ಯಾಧುನಿಕ ಕಳೆ ತೆಗೆಯುವ ಯಂತ್ರವನ್ನು 1 ಕೋಟಿ 28 ಲಕ್ಷ ರೂಪಾಯಿ ವೆಚ್ಚದಲ್ಲಿ ಪಾಲಿಕೆ ಖರೀದಿಸಿದೆ. ಈ ಯಂತ್ರವು 5 ಟನ್‌ಗಳವರೆಗೆ ಸಂಗ್ರಹಿಸುವ ಸಾಮರ್ಥ್ಯವನ್ನು ಹೊಂದಿದ್ದು, 4 ರಿಂದ 6 ಮೀಟರ್ ಕಾರ್ಯ ಅಗಲವಿದೆ. ಇದರೊಂದಿಗೆ ಲೈವ್ ಜಿಪಿಎಸ್ ಟ್ರ್ಯಾಕಿಂಗ್ ವ್ಯವಸ್ಥೆ, ಸುರಕ್ಷತಾ ಸೆನ್ಸಾರ್‌ಗಳು ಹಾಗೂ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ.

***************

ದ್ವೇಷ–ಭಾಷಣ ಮಸೂದೆ ಕುರಿತು ಚರ್ಚಿಸಲು ಪ್ರತಿಪಕ್ಷಗಳಿಗೆ ಸರಿಯಾಗಿ ಅವಕಾಶ ನೀಡದೇ ತರಾತುರಿಯಲ್ಲಿ ಬೆಳಗಾವಿ ಅಧಿವೇಶನದಲ್ಲಿ ಅಂಗೀಕರಿಸಲಾಗಿದೆ. ಈ ಮಸೂದೆ ಅಂಗೀಕರಿಸಿರುವುದು ವಾಕ್ ಸ್ವಾತಂತ್ರ್ಯಕ್ಕೆ ಕಡಿವಾಣ ಹಾಕಿದಂತೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ.

ಇದೇ ವೇಳೆ ರಾಜ್ಯದಲ್ಲಿ ಮಾದಕದ್ರವ್ಯಗಳ ಹಾವಳಿ ಮೀತಿಮೀರಿದೆ ಎಂದು ಅವರು ದೂರಿದ್ದಾರೆ. ಗೃಹಲಕ್ಷ್ಮಿ ಯೋಜನೆ ಒಂದು ದೊಡ್ಡ ಹಗರಣವಾಗಿದ್ದು, ಮಹಿಳೆಯರ ಖಾತೆಗೆ ಹಣ ಹಾಕುವವರೆಗೂ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

***************

ನಾಳೆ ಕ್ರೈಸ್ತ ಬಾಂಧವರ ಪವಿತ್ರ ಹಬ್ಬ ಕ್ರಿಸ್ಮಸ್. ಈ ಹಿನ್ನೆಲೆಯಲ್ಲಿ ರಾಜಧಾನಿ ಬೆಂಗಳೂರಿನಲ್ಲಿ ಹಬ್ಬದ ಸಂಭ್ರಮ ಮನೆ ಮಾಡಿದೆ. ರಾಜ್ಯದ ಚರ್ಚ್‌ಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿದೆ.

ಬೆಂಗಳೂರಿನಲ್ಲಿ ಕ್ರೈಸ್ತ ಬಾಂಧವರು ಹಾಗೂ ಜನರು ಚರ್ಚ್‌ಗೆ ತೆರಳುವ ಹಿನ್ನೆಲೆಯಲ್ಲಿ ವಾಹನ ದಟ್ಟಣೆ ಹೆಚ್ಚಾಗಿರಲಿದೆ. ಈ ಹಿನ್ನೆಲೆಯಲ್ಲಿ ಸಂಚಾರಿ ಪೊಲೀಸ್ ಇಲಾಖೆ, ಸಂಚಾರಿ ಸಲಹೆಯನ್ನು ನೀಡಿದೆ.

ಇಂದು ಸಂಜೆಯಿಂದ ಮಧ್ಯರಾತ್ರಿ 12 ಗಂಟೆಯವರೆಗೆ ಬೆಂಗಳೂರಿನ ಹಲವು ಮಾಲ್‌ಗಳ ಬಳಿ ಭಾರೀ ಜನಸಂದಣಿ ಉಂಟಾಗುವ ನಿರೀಕ್ಷೆಯಿದೆ. ಈ ಪ್ರದೇಶದಲ್ಲಿ ಸಂಚಾರ ಮತ್ತು ಪಾರ್ಕಿಂಗ್ ನಿರ್ಬಂಧಿಸಲಾಗಿದೆ.

ಚಿಕ್ಕಬಳ್ಳಾಪುರ  ಜಿಲ್ಲೆಯಾದ್ಯಂತ ಹಬ್ಬದ ಸಂಭ್ರಮ, ಸಡಗರ ಮನೆ ಮಾಡಿದೆ.

ಮನೆ ಹಾಗೂ ಚರ್ಚ್‌ಗಳಲ್ಲಿ ಗೋದಲಿ ನಿರ್ಮಿಸಿ ಅಲಂಕರಿಸುವುದು ಕ್ರಿಸ್‌ಮಸ್ ಆಚರಣೆಯ ಪ್ರಮುಖ ಆಕರ್ಷಣೆಯಾಗಿದೆ.

ನಗರದ ಸಂತ ಜೋಸೆಫರ ಚರ್ಚ್ ಸೇರಿದಂತೆ ವಿವಿಧ ಚರ್ಚ್ ಗಳನ್ನು ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಸಿಂಗರಿಸಲಾಗಿದೆ.

***************

ವಿಧಾನಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ, ಇಂದು ಉಡುಪಿ ಜಿಲ್ಲೆಯ ಕಾಪು ತಾಲೂಕಿನ ಕಾಪು ಮಾರಿಗುಡಿ ದೇವಸ್ಥಾನಕ್ಕೆ ಭೇಟಿ ನೀಡಿ ಉಚ್ಚಂಗಿ ಸಹಿತ ಶ್ರೀ ಮಾರಿಯಮ್ಮ ದೇವಿಯ ದರ್ಶನ ಪಡೆದರು.

ಬಳಿಕ ಮಾತನಾಡಿದ ಅವರು, ನನಗೆ ಇದು ಜೀವನದಲ್ಲಿ ಅತ್ಯಂತ ಶ್ರೇಷ್ಠವಾದ ದಿನ, ಇಂತಹ ಚರಿತ್ರೆಯುಳ್ಳ ದೇವಸ್ಥಾನಕ್ಕೆ ಬಂದಿರುವುದು ನನ್ನ ಪೂರ್ವ ಜನ್ಮದ ಪುಣ್ಯವಾಗಿದೆ. ತಾಯಿ ಎಲ್ಲರಿಗೂ ಒಳ್ಳೆಯದನ್ನು ಮಾಡಲಿ ಎಂದು ಹಾರೈಸಿದರು.

***************

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿ ಚುನಾವಣೆಯ ಮತ ಎಣಿಕೆ ನಡೆದಿದ್ದು, 19 ವಾರ್ಡ್‌ಗಳ ಪೈಕಿ ಬಿಜೆಪಿ 14 ಸ್ಥಾನಗಳೊಂದಿಗೆ ಸ್ಪಷ್ಟ ಬಹುಮತ ಪಡೆದು ಅಧಿಕಾರದ ಚುಕ್ಕಾಣಿ ಹಿಡಿಯಲಿದೆ.

ಉಳಿದಂತೆ ಕಾಂಗ್ರೆಸ್ 3 ಸ್ಥಾನ, ಜೆಡಿಎಸ್ ಹಾಗೂ ಪಕ್ಷೇತರರು ತಲಾ ಒಂದು ಸ್ಥಾನ ಪಡೆದಿದ್ದಾರೆ.

ನಗರಸಭೆಯ 21ನೇ ವಾರ್ಡ್ ಉಪ ಚುನಾವಣೆ ಫಲಿತಾಂಶ ಪ್ರಕಟವಾಗಿದ್ದು, ಬಿಜೆಪಿಯ ಜಿ.ಜೆ.ನವೀನ್ ಗೆಲುವು ಸಾಧಿಸಿದ್ದಾರೆ.

***************

ಬೆಂಗಳೂರು ದಕ್ಷಿಣ ಜಿಲ್ಲಾ ಪೊಲೀಸ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದೊಂದಿಗೆ ರಾಮನಗರದ ಜಿಲ್ಲಾ ಪೊಲೀಸ್ ಕಚೇರಿ ಸಭಾಂಗಣದಲ್ಲಿ ಅಕ್ಕ ಪಡೆ ಯೋಜನೆಯ ಜಿಲ್ಲಾ ಮಟ್ಟದ ಮೇಲ್ವಿಚಾರಣೆ ಮತ್ತು ಪರಿಶೀಲನಾ ಸಮಿತಿ ಸಭೆ ನಡೆಯಿತು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕ ರಾಮಚಂದ್ರಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ದಿನೇಶ್, ಡಿವೈಎಸ್‌ಪಿ ಶ್ರೀನಿವಾಸ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

*******ಮುಕ್ತಾಯ********